ಆ) ಒಟ್ಟು 39 ನಿಯಮಗಳ ಪೈಕಿ 2 ಕರಡು ನಿಯಮಾವಳಿಗಳನ್ನು ದಿನಾಂಕ 14-11-95ರಲ್ಲಿ ಹೊರಡಿಸಲಾಗಿದೆ. ಉಳಿದ 37 ನಿಯಮಾವಳಿಗಳನ್ನು ರಚಿಸುವ ಬಗ್ಗೆ ಇಲಾಖಾ ಹಿರಿಯ ಅಧಿಕಾರಿಗಳ ಹಂತದ ಸಮಿತಿಗಳನ್ನು ರಚಿಸಿದ್ದು, ಸದರಿ ಸಮಿತಿಗಳಿಗೆ ನಿಯಮಾವಳಿಗಳನ್ನು ಶೀಘ್ರವಾಗಿ ರಚಿಸಲು ಸೂಚಿಸಲಾಗಿದೆ.

ಇ) ಇಲ್ಲ.

ಈ) ಹೌದು, ರದ್ದುಪಡಿಸಲು ಕಾನೂನಿನಲ್ಲಿ ಅವಕಾಶವಿದೆ.

ವಿಷಯ:- ಇಂಡಿ ಮತ್ತು ಸಿಂಧಗಿ ತಾಲ್ಲೂಕುಗಳಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ.

1331 (1787) **ಶ್ರೀ ರವಿಕಾಂತ್ ಎಸ್. ಪಾಟೀಲ್ (ಇಂಡಿ):-** ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಇಂಡಿ ಮತ್ತು ಸಿಂಧಗಿ ತಾಲ್ಲೂಕುಗಳಲ್ಲಿ ಸರ್ಕಾರಿ ಕಾಲೇಜುಗಳಿಗೆ ಸ್ವಂತ ಕಟ್ಟಡಗಳು ಇಲ್ಲದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇ ಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) ಇಂಡಿ ತಾಲ್ಲೂಕಿನ ಬರಡೋಲ ಮತ್ತು ಶಿರಶ್ಯಾಡ ಗ್ರಾಮಗಳಲ್ಲಿರುವ ಪದವಿಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಸಿಂಧಗಿ ತಾಲ್ಲೂಕಿನಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜುಗಳು ಇರುವುದಿಲ್ಲ.

ಆ) ಈ ಕಾಲೇಜುಗಳು ಸಂಯುಕ್ತ ಪದವಿಪೂರ್ವ ಕಾಲೇಜುಗಳಾಗಿರುವುದರಿಂದ ಪ್ರಸ್ತುತ ಪ್ರೌಢ ಶಾಲೆಯ ಕಟ್ಟಡದಲ್ಲಿ ನಡೆಯುತ್ತಿದೆ. ಈ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿ ಅವಶ್ಯಕತೆ ಬಗ್ಗೆ ಪ್ರಾಂಶುಪಾಲರಿಂದ ವರದಿ ಕೋರಲಾಗಿದೆ.

ವಿಷಯ:- ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ.

1332 (1663) **ಶ್ರೀ ರಾಮಲಿಂಗಾರೆಡ್ಡಿ (ಜಯನಗರ):-** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯ ಕಾರ್ಯಾರಂಭ ಮಾಡಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಮಕ್ಕಳಿಗೆ ಒಳರೋಗಿಯಾಗಿ ಚಿಕಿತ್ಸೆ ನೀಡಲು ಅವಕಾಶ ಒದಗಿಸಲಾಗಿದೆ?

ಇ) ಈ ಸಂಸ್ಥೆಯ ನಿರ್ಮಾಣಕಾರ್ಯ ಪೂರ್ಣಗೊಂಡಿದೆಯೇ?

ಈ) ಇಲ್ಲದಿದ್ದಲ್ಲಿ ಇದನ್ನು ಪೂರ್ಣಗೊಳಿಸಲು ಬೇಕಾಗುವ ಹಣವೆಷ್ಟು?

ಉ) ಈ ನಿರ್ಮಾಣ ಕೆಲಸಗಳು ಯಾವಾಗ ಪೂರ್ಣಗೊಳ್ಳುತ್ತದೆ?

ಊ) ಈ ಸಂಸ್ಥೆಯು ಪ್ರಾರಂಭವಾಗಿದ್ದರೆ ವಾಣಿ ವಿಲಾಸ ಆಸ್ಪತ್ರೆಯ ಆವರಣದಲ್ಲಿರುವ ಮಕ್ಕಳ

ಆಸ್ಪತ್ರೆಯನ್ನು ಇಲ್ಲಿಗೆ ಸ್ಥಳಾಂತರಿಸಲಾಗಿದೆಯೇ?

ಡಾ।। ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಹೌದು

ಆ) ನಲವತ್ತು ರೋಗಿಗಳಿಗೆ ಚಿಕಿತ್ಸೆ ನೀಡಲು ಅವಕಾಶ ಒದಗಿಸಲಾಗಿದೆ.

ಇ) ಇಲ್ಲ.

ಈ) ಸುಮಾರು ಎಪ್ಪತ್ತೈದು ಲಕ್ಷ ರೂ.ಗಳು

ಉ) ಡಿಸೆಂಬರ್ 1996 ರಲ್ಲಿ ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಊ) ಇಲ್ಲ.

ವಿಷಯ:- ಮೈಸೂರಿನ ಮುಕ್ತ ವಿಶ್ವವಿದ್ಯಾಲಯಕ್ಕೆ ಹಣಕಾಸಿನ ನೆರವು.

1333 (1664) **ಶ್ರೀ ರಾಮಲಿಂಗಾರೆಡ್ಡಿ (ಜಯನಗರ):-** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರಿನ ಅಂಚೆ ಮತ್ತು ತೆರಪಿನ ಶಿಕ್ಷಣ ಸಂಸ್ಥೆಯನ್ನು ಮುಕ್ತ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸಲಾಗಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗಿನಿಂದ ಈ ಮುಕ್ತ ವಿಶ್ವವಿದ್ಯಾಲಯ ಅಸ್ತಿತ್ವಕ್ಕೆ ಬಂದಿದೆ?

ಇ) ಈ ವಿಶ್ವವಿದ್ಯಾಲಯಕ್ಕೆ 1996-97ರಲ್ಲಿ ಸರ್ಕಾರದವರು ನೀಡಲಿರುವ ಧನ ಸಹಾಯ-ವೆಷ್ಟು?

ಈ) 1969 ರಿಂದ 1991ರವರೆಗೆ ಅಂಚೆ ತೆರಪಿನ ಸಂಸ್ಥೆಯ ವರಮಾನವನ್ನು ಪ್ರತ್ಯೇಕವಾಗಿ ಮೈಸೂರು ವಿಶ್ವವಿದ್ಯಾಲಯದಲ್ಲಿ ಇಡಲಾಗಿದ್ದು ಆ ಹಣವನ್ನು ಈ ಹೊಸ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲಾಗಿದೆ?

ಉ) ಈ ಹೊಸ ವಿಶ್ವವಿದ್ಯಾಲಯಕ್ಕೆ ಧನ ಸಹಾಯ ಆಯೋಗದಿಂದ ಧನ ಸಹಾಯ ಒದಗಿ-ಸಲು ಸರ್ಕಾರದವರು ಕ್ರಮ ಕೈಗೊಳ್ಳುತ್ತಿರುವರೆ?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

ಅ) ಹೌದು

ಆ) ದಿನಾಂಕ 01-06-1996

ಇ) ಆಯವ್ಯಯದಲ್ಲಿ 10 ಲಕ್ಷ ರೂ.ಗಳನ್ನು ವಿತರಿಸಲಾಗಿದೆ.

ಈ) ಅಂಚೆ ಮತ್ತು ತೆರಪಿನ ಶಿಕ್ಷಣ ಸಂಸ್ಥೆ ಮೈಸೂರು ವಿಶ್ವವಿದ್ಯಾಲಯದ ಅಂಗವಾದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಮುಕ್ತ ವಿಶ್ವವಿದ್ಯಾಲಯವೇ ಯು.ಜಿ.ಸಿ.ಯನ್ನು ನೇರವಾಗಿ ಸಂಪರ್ಕಿಸಬೇಕು.